ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 163
ಉತ್ತರಿಸಬೇಕಾದ ದಿನಾಂಕ – 07.02.2018(ಕಾಲಾವಕಾಶ ಪಡೆದಿದೆ)
ಸದಸ್ಯರ ಹೆಸರು – ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2017-18ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ;	ಸರ್ಕಾರವು ಕರ್ನಾಟಕವನ್ನು ಗುಡಿಸಲು ಮುಕ್ತವನ್ನಾಗಿ ಮಾಡಲು ಉದ್ದೇಶಿಸಿ ಪ್ರತಿ ವರ್ಷ 3 ಲಕ್ಷ ಮನೆಗಳಂತೆ 5 ವರ್ಷಗಳ ಅವಧಿಯಲ್ಲಿ ಒಟ್ಟು 15 ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದ್ದು 2017-18ನೇ ಸಾಲಿನ ಆಯವ್ಯಯದಲ್ಲೂ 3 ಲಕ್ಷ ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ನಿಗಮವು ಈವರೆಗೆ ಒಟ್ಟು 13.95 ಲಕ್ಷ ಮನೆಗಳನ್ನು ನಿರ್ಮಿಸಲಾಗಿದ್ದು ಬಾಕಿ 1.05 ಲಕ್ಷ ಮನೆಗಳನ್ನು ಪ್ರಸಕ್ತ ಆರ್ಥಿಕ ವರ್ಷ ಕೊನೆಗೊಳ್ಳುವ ಅವಧಿಯೊಳಗೆ ನಿರ್ಮಿಸಲು ಉದ್ದೇಶಿದೆ.
ಆ)	ಗ್ರಾಮೀಣ ಪ್ರದೇಶಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳಲ್ಲಿ ಈವರೆಗೆ ಎಷ್ಟು ಮನೆಗಳನ್ನು ಪೂರ್ಣಗೊಳಿಸಿರುವುದಿಲ್ಲ; ಇದಕ್ಕೆ ಕಾರಣಗಳೇನು;	ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ನಿರ್ಮಿಸುತ್ತಿರುವ ಮನೆಗಳ ಪೈಕಿ 234373 ಮನೆಗಳು ತಳಪಾಯ ಹಂತದಲ್ಲಿ, 149491 ಮನೆಗಳು ಕಿಟಕಿ ಹಂತದಲ್ಲಿ, 142540 ಮನೆಗಳು ಛಾವಣಿ ಹಂತದಲ್ಲಿ ಹಂತದಲ್ಲಿದ್ದು, 1.05 ಲಕ್ಷ ಮನೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಈ ಸಂಬಂಧ ಎಲ್ಲಾ ಫಲಾನುಭವಿಗಳಿಗೆ ಮನೆ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ SMS ಕಳುಹಿಸಲಾಗುತ್ತಿದೆ. ಫಲಾನುಭವಿಗಳ ಕುಂದುಕೊರತೆಗಳಿಗೆ ಸಹಾಯವಾಣಿಯನ್ನು ತೆರೆದು ಸಮಸ್ಯೆಯನ್ನು ಬಗೆಹರಿಸಲಾಗುತ್ತಿದೆ. ಅಲ್ಲದೇ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಪ್ರವಾಸ ಕೈಗೊಂಡು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ಕೈಗೊಳ್ಳಲಾಗುತ್ತಿದ್ದು, ನಿಗದಿತ ಕಾಲಾವಧಿಯಲ್ಲಿ ಮನೆಗಳನ್ನು ಪೂರ್ಣಗೊಳಿಸಲು ಬೇಕಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
ಇ)	ಈ ಯೋಜನೆಯಡಿಯಲ್ಲಿ ಪೂರ್ಣಗೊಳಿಸಿರುವ ಹಾಗೂ ಮುಕ್ತಾಯದ ಹಂತದಲ್ಲಿರುವ ಮನೆಗಳ ಸಂಖ್ಯೆ ಎಷ್ಟು;	
ಈ)	ಈ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?	

ಸಂಖ್ಯೆ: ವಇ 21 ಹೆಚ್ಎಎಂ 2018

(ಎಂ. ಕೃಷ್ಣಪ್ಪ)
ವಸತಿ ಸಚಿವರು.